# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗದಗ ಜಿಲ್ಲೆ, ಗದಗ ತಾಲ್ಲೂಕಿನ ಬಿಂಕದಕಟ್ಟಿ ಮೃಗಾಲಯಕ್ಕೆ ಕುಡಿಯುವ ನೀರು ಸರಬರಾಜು ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ: 1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು ಇವರ ಟಿಪ್ಪಣಿ ಸಂ:ಗ್ರಾಅಪ/2085/2017-18, ದಿನಾಂಕ:30.12.2017.

2. ಮುಖ್ಯ ಇಂಜಿನಿಯರ್‌ರವರ ಅನುಮೋದನೆ.

--

**ಪೀಠಿಕೆ:**

ಮೇಲೆ ಉಲ್ಲೇಖ (1)ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರ ಟಿಪ್ಪಣಿಯಲ್ಲಿ ಗದಗ ಜಿಲ್ಲೆ, ಗದಗ ತಾಲ್ಲೂಕಿನ ಬಿಂಕದಕಟ್ಟಿ ಮೃಗಾಲಯಕ್ಕೆ ನೀರು ಸರಬರಾಜು ಮಾಡುವ ಕಾಮಗಾರಿಯಲ್ಲಿ ಪೈಪ್‌ಲೈನ್ ವ್ಯವಸ್ಥೆ ಅಳವಡಿಸುವುದು ಮತ್ತು ಎರಡು ನೆಲಮಟ್ಟದ ನೀರು ಸಂಗ್ರಹಾಗಾರಗಳನ್ನು ನಿರ್ಮಿಸುವ ಕಾಮಗಾರಿಗಳಿಗೆ ಒಟ್ಟಾರೆ **ರೂ.31.50ಲಕ್ಷ** ಅಂದಾಜು ಮೊತ್ತಕ್ಕೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಆದೇಶಿಸಿರುತ್ತಾರೆ. ಪ್ರಸ್ತುತ ಪ್ರಸ್ತಾವನೆಯನ್ನು ಮುಖ್ಯ ಇಂಜಿನಿಯರ್ ರವರು ಆಡಳಿತಾತ್ಮಕ ಅನುಮೋದನೆ ನೀಡಬಹುದು ಎಂದು ಅನುಮೋದಿಸಿರುತ್ತಾರೆ. 2017-18ರ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಉದ್ದೇಶಿತ ಯೋಜನೆಯನ್ನು ಅಳವಡಿಸಲಾಗಿರುವುದಿಲ್ಲ, ಆದರೆ ಸದರಿ ಪ್ರಸ್ತಾವನೆಯು ಕುಡಿಯುವ ನೀರಿನ ಸರಬರಾಜು ಕಾಮಗಾರಿಯಾಗಿರುವುದರ ಮೇರೆಗೆ ಕುಡಿಯುವ ನೀರಿನ ಸರಬರಾಜಿನಲ್ಲಿ ಯಾವುದೇ ಅಡಚಣೆ ಹಾಗೂ ತೊಂದರೆಯಾಗುವುದನ್ನು ತಪ್ಪಿಸುವ ಉದ್ದೇಶದಿಂದ NRDWP ಯೋಜನೆಯಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 56 ಗ್ರಾನೀಸ(3) 2017 ಬೆಂಗಳೂರು, ದಿನಾಂಕ:03.01.2018.**

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಗದಗ ಜಿಲ್ಲೆ, ಗದಗ ತಾಲ್ಲೂಕಿನ ಬಿಂಕದಕಟ್ಟಿ ಮೃಗಾಲಯಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಕಾಮಗಾರಿಯ **ರೂ.31.50ಲಕ್ಷ (ಮೂವತ್ತೊಂದು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)** ಅಂದಾಜು ಮೊತ್ತಕ್ಕೆ NRDWP ಯೋಜನೆಯಡಿಯಲ್ಲಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಗದಗ ತಾಲ್ಲೂಕಿನ ಬಿಂಕದಕಟ್ಟೆ ಗ್ರಾಮದ ಬಿಂಕದಕಟ್ಟೆ ಮೃಗಾಲಯದ ಆವರಣದಲ್ಲಿ ಪೈಪ್‌ಲೈನ್ ಸೌಲಭ್ಯವನ್ನು ಒದಗಿಸುವ ಕಾಮಗಾರಿ | 7.50 |
| 2 | ಗದಗ ತಾಲ್ಲೂಕಿನ ಬಿಂಕದಕಟ್ಟೆ ಗ್ರಾಮದ ಬಿಂಕದಕಟ್ಟೆ ಮೃಗಾಲಯದ ಆವರಣದಲ್ಲಿ 50,000 ಲೀಟರ್ ಸಾಮರ್ಥ್ಯದ ನೆಲಮಟ್ಟದ ನೀರು ಸಂಗ್ರಹಾಗಾರವನ್ನು ನಿರ್ಮಾಣ ಮಾಡುವ ಕಾಮಗಾರಿ | 10.00 |
| 3 | ಗದಗ ತಾಲ್ಲೂಕಿನ ಬಿಂಕದಕಟ್ಟೆ ಗ್ರಾಮದ ಬಿಂಕದಕಟ್ಟೆ ಮೃಗಾಲಯದ ಆವರಣದಲ್ಲಿ 1,00000 ಲೀಟರ್ ಸಾಮರ್ಥ್ಯದ ನೆಲಮಟ್ಟದ ನೀರು ಸಂಗ್ರಹಾಗಾರವನ್ನು ನಿರ್ಮಾಣ ಮಾಡುವ ಕಾಮಗಾರಿ | 14.00 |
| | ಒಟ್ಟು ಮೊತ್ತ | **31.50** |

2. ಈ ಆದೇಶದಡಿ ಅನುಮೋದನೆಯಾದ ಕುಡಿಯುವ ನೀರಿನ ಯೋಜನೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE,RDWSD ದೃಢೀಕರಿಸಿದ ತಾಂತ್ರಿಕ ಅನುಮೋದನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ.

3. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

4. ಸದರಿ ಕಾಮಗಾರಿಯನ್ನು 2017-18ನೇ ಸಾಲಿನ ಪರಿಷ್ಕೃತ ಕ್ರಿಯಾ ಯೋಜನೆಯಲ್ಲಿ ಕಡ್ಡಾಯವಾಗಿ ಅಳವಡಿಸುವ ಷರತ್ತಿನೊಂದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

5. ಈ ಕಾಮಗಾರಿಯು ಹಿಂದೆ ಯಾವುದೇ ಕ್ರಿಯಾ ಯೋಜನೆಯಲ್ಲಿ ಪುನರಾವರ್ತನೆಯಾಗಿಲ್ಲವೆಂದು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009.
11. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಗದಗ.**
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, **ಗದಗ.**
13. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವೃತ್ತ ಕಛೇರಿ, **ಬೆಳಗಾವಿ.**
14. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಗದಗ.**
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್(TNMC), ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
16. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
17. ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, **RDWSD** / ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರುಗಳು ಆಪ್ತ ಸಹಾಯಕರು
18. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
19. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, **BWSSB Branch,** ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
20. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
23. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
24. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.